**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತೇಳನೆಯ ಅಧಿವೇಶನ**

# ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–76)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024, ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024, ಶ್ರೀ ಘಾಟಿ ಸುಬ್ರಹ್ಮಣ್ಯ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024 ಮತ್ತು ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಪ್ರಾಧಿಕಾರ ಅಭಿವೃದ್ಧಿ ಅಧಿನಿಯಮ, 2024ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024 (2024ರ ಕರ್ನಾಟಕ ಅಧಿನಿಯಮ ಸಂಖ್ಯೆ 18), ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024 (2024ರ ಕರ್ನಾಟಕ ಅಧಿನಿಯಮ ಸಂಖ್ಯೆ 44), ಶ್ರೀ ಘಾಟಿ ಸುಬ್ರಹ್ಮಣ್ಯ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024 (2024ರ ಕರ್ನಾಟಕ ಅಧಿನಿಯಮ ಸಂಖ್ಯೆ 15) ಮತ್ತು ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಪ್ರಾಧಿಕಾರ ಅಭಿವೃದ್ಧಿ ಅಧಿನಿಯಮ, 2024 (2024ರ ಕರ್ನಾಟಕ ಅಧಿನಿಯಮ ಸಂಖ್ಯೆ 16)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 2024ರ ಕರ್ನಾಟಕ ಅಧಿನಿಯಮ 18ರ ತಿದ್ದುಪಡಿ.-** ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024 (2024ರ ಕರ್ನಾಟಕ ಅಧಿನಿಯಮ ಸಂಖ್ಯೆ 18)ರ 10ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿರುವ "ಕರ್ನಾಟಕ ಸರ್ಕಾರ ಸಚಿವಾಲಯ ಸೇವೆ/ಕರ್ನಾಟಕ ಆಡಳಿತ ಸೇವೆಗಳ (ಸೂಪರ್ ಟೈಮ್ ಸ್ಕೇಲ್)/" ಎಂಬ ಪದಗಳು, ಆವರಣಗಳು ಮತ್ತು ಚಿಹ್ನೆಗಳನ್ನು ಬಿಟ್ಟುಬಿಡತಕ್ಕದ್ದು.

**3. 2024ರ ಕರ್ನಾಟಕ ಅಧಿನಿಯಮ 44ರ ತಿದ್ದುಪಡಿ.-** ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024 (2024ರ ಕರ್ನಾಟಕ ಅಧಿನಿಯಮ ಸಂಖ್ಯೆ 44)ರಲ್ಲಿ,-

(i) ಪ್ರಕರಣ 3ರ (4)ನೇ ಉಪಪ್ರಕರಣದ (ಬಿ) ಖಂಡದ ತರುವಾಯ ಈ ಮುಂದಿನ ಹೊಸ ಖಂಡವನ್ನು ಸೇರಿಸತಕ್ಕದ್ದು, ಎಂದರೆ:-

"

| | | |
|---|---|---|
| (ಬಿ-1) | ಸವದತ್ತಿ ಯಲ್ಲಮ್ಮ ವಿಧಾನ ಸಭಾ ಮತಕ್ಷೇತ್ರದ ವಿಧಾನ ಸಭೆ ಸದಸ್ಯರು | ಪದನಿಮಿತ್ತ ಉಪಾಧ್ಯಕ್ಷರು |

"

(ii) 10ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿರುವ "ಕರ್ನಾಟಕ ಸರ್ಕಾರ ಸಚಿವಾಲಯ ಸೇವೆ/ಕರ್ನಾಟಕ ಆಡಳಿತ ಸೇವೆಗಳ (ಸೂಪರ್ ಟೈಮ್ ಸ್ಕೇಲ್)/" ಎಂಬ ಪದಗಳು, ಆವರಣಗಳು ಮತ್ತು ಚಿಹ್ನೆಗಳನ್ನು ಬಿಟ್ಟುಬಿಡತಕ್ಕದ್ದು.

**4. 2024ರ ಕರ್ನಾಟಕ ಅಧಿನಿಯಮ 15ರ ತಿದ್ದುಪಡಿ.-** ಶ್ರೀ ಘಾಟಿ ಸುಬ್ರಮಣ್ಯ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024 (2024ರ ಕರ್ನಾಟಕ ಅಧಿನಿಯಮ ಸಂಖ್ಯೆ 15)ರ 10ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿರುವ "ಕರ್ನಾಟಕ ಸರ್ಕಾರ ಸಚಿವಾಲಯ ಸೇವೆ/ಕರ್ನಾಟಕ ಆಡಳಿತ ಸೇವೆಗಳ (ಸೂಪರ್ ಟೈಮ್ ಸ್ಕೇಲ್)/" ಎಂಬ ಪದಗಳು, ಆವರಣಗಳು ಮತ್ತು ಚಿಹ್ನೆಗಳನ್ನು ಬಿಟ್ಟುಬಿಡತಕ್ಕದ್ದು.

**5. 2024ರ ಕರ್ನಾಟಕ ಅಧಿನಿಯಮ 16ರ ತಿದ್ದುಪಡಿ.-** ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024 (2024ರ ಕರ್ನಾಟಕ ಅಧಿನಿಯಮ ಸಂಖ್ಯೆ 16)ರ 10ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿರುವ "ಕರ್ನಾಟಕ ಸರ್ಕಾರ ಸಚಿವಾಲಯ ಸೇವೆ/ಕರ್ನಾಟಕ ಆಡಳಿತ ಸೇವೆಗಳ (ಸೂಪರ್ ಟೈಮ್ ಸ್ಕೇಲ್)/" ಎಂಬ ಪದಗಳು, ಆವರಣಗಳು ಮತ್ತು ಚಿಹ್ನೆಗಳನ್ನು ಬಿಟ್ಟುಬಿಡತಕ್ಕದ್ದು.

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ
**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆಯ ಎ-ದರ್ಜೆಯ ಹಿರಿಯ ಶ್ರೇಣಿ ಅಧಿಕಾರಿಯನ್ನು ಸದರಿ ಪ್ರಾಧಿಕಾರಗಳ ಕಾರ್ಯದರ್ಶಿಯಾಗಿ ನೇಮಿಸುವ ಸಲುವಾಗಿ ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024 (2024ರ ಕರ್ನಾಟಕ ಅಧಿನಿಯಮ ಸಂಖ್ಯೆ 18), ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024 (2024ರ ಕರ್ನಾಟಕ ಅಧಿನಿಯಮ ಸಂಖ್ಯೆ 44), ಶ್ರೀ ಘಾಟಿ ಸುಬ್ರಹ್ಮಣ್ಯ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024 (2024ರ ಕರ್ನಾಟಕ ಅಧಿನಿಯಮ ಸಂಖ್ಯೆ 15) ಮತ್ತು ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಪ್ರಾಧಿಕಾರ ಅಭಿವೃದ್ಧಿ ಅಧಿನಿಯಮ, 2024 (2024ರ ಕರ್ನಾಟಕ ಅಧಿನಿಯಮ ಸಂಖ್ಯೆ 16)ನ್ನು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ,

## **ಆರ್ಥಿಕ ಜ್ಞಾಪನ ಪತ್ರ**

ಪ್ರಸ್ತಾವಿತ ಶಾಸನಾತ್ಮಕ ಕ್ರಮದಿಂದ ವಾರ್ಷಿಕವಾಗಿ ಯಾವುದೇ ಹೆಚ್ಚುವರಿ ವೆಚ್ಚ ಉಂಟಾಗುವುದಿಲ್ಲ.

**ರಾಮಲಿಂಗಾ ರೆಡ್ಡಿ**
ಸಾರಿಗೆ ಮತ್ತು ಮುಜರಾಯಿ ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

**ಅನುಬಂಧ**

**ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024**

**(2024ರ ಕರ್ನಾಟಕ ಅಧಿನಿಯಮ ಸಂಖ್ಯೆ 18), ಉದ್ಧೃತ ಭಾಗ**

**XXX XXX XXX**

**10. ಕಾರ್ಯದರ್ಶಿಯ ನೇಮಕಾತಿ.**- (1) ರಾಜ್ಯ ಸರ್ಕಾರವು, ಕರ್ನಾಟಕ ಸರ್ಕಾರ ಸಚಿವಾಲಯ ಸೇವೆ/ ಕರ್ನಾಟಕ ಆಡಳಿತ ಸೇವೆಗಳ (ಸೂಪರ್ ಟೈಮ್ ಸ್ಕೇಲ್)/ ಧರ್ಮಾದಾಯ ಇಲಾಖೆಯ ಎ-ದರ್ಜೆಯ ಹಿರಿಯ ಶ್ರೇಣಿಯ ಅಧಿಕಾರಿಯನ್ನು ಪ್ರಾಧಿಕಾರದ ಕಾರ್ಯದರ್ಶಿಯಾಗಿ ಮತ್ತು ಧರ್ಮಾದಾಯ ಇಲಾಖೆಯ ಬಿ-ದರ್ಜೆಯ ಅಧಿಕಾರಿಯನ್ನು ಪ್ರಾಧಿಕಾರದ ಉಪಕಾರ್ಯದರ್ಶಿಯಾಗಿ ನೇಮಿಸತಕ್ಕದ್ದು.

(2) ಕಾರ್ಯದರ್ಶಿಯು, ಮತ್ತು ಇತರ ಅಧಿಕಾರಿಗಳು ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ವೇತನ ಮತ್ತು ಇತರ ಭತ್ಯೆಗಳನ್ನು ಪಡೆಯತಕ್ಕದ್ದು.

(3) ರಾಜ್ಯ ಸರ್ಕಾರವು, ಕಾಲಕಾಲಕ್ಕೆ ತಾನು ಯುಕ್ತವೆಂದು ಭಾವಿಸುವ ಅಂಥ ಅವಧಿಗಾಗಿ ಕಾರ್ಯದರ್ಶಿಗೆ ರಜೆಯನ್ನು ಮಂಜೂರು ಮಾಡಬಹುದು.

**XXX XXX XXX**

**ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024**
**(2024ರ ಕರ್ನಾಟಕ ಅಧಿನಿಯಮ ಸಂಖ್ಯೆ 44), ಉದ್ಧೃತ ಭಾಗ**

**XXX XXX XXX**

**10. ಕಾರ್ಯದರ್ಶಿಯ ನೇಮಕಾತಿ.**- (1) ರಾಜ್ಯ ಸರ್ಕಾರವು, ಕರ್ನಾಟಕ ಸರ್ಕಾರ ಸಚಿವಾಲಯ ಸೇವೆ/ ಕರ್ನಾಟಕ ಆಡಳಿತ ಸೇವೆಗಳ (ಸೂಪರ್ ಟೈಮ್ ಸ್ಕೇಲ್)/ ಧರ್ಮಾದಾಯ ಇಲಾಖೆಯ ಎ-ದರ್ಜೆಯ ಹಿರಿಯ ಶ್ರೇಣಿಯ ಅಧಿಕಾರಿಯನ್ನು ಪ್ರಾಧಿಕಾರದ ಕಾರ್ಯದರ್ಶಿಯಾಗಿ ಮತ್ತು ಧರ್ಮಾದಾಯ ಇಲಾಖೆಯ ಬಿ-ದರ್ಜೆಯ ಅಧಿಕಾರಿಯನ್ನು ಪ್ರಾಧಿಕಾರದ ಉಪಕಾರ್ಯದರ್ಶಿಯಾಗಿ ನೇಮಿಸತಕ್ಕದ್ದು.

(2) ಕಾರ್ಯದರ್ಶಿಯು, ಮತ್ತು ಇತರ ಅಧಿಕಾರಿಗಳು ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ವೇತನ ಮತ್ತು ಇತರ ಭತ್ಯೆಗಳನ್ನು ಪಡೆಯತಕ್ಕದ್ದು.

(3) ರಾಜ್ಯ ಸರ್ಕಾರವು, ಕಾಲಕಾಲಕ್ಕೆ ತಾನು ಯುಕ್ತವೆಂದು ಭಾವಿಸುವ ಅಂಥ ಅವಧಿಗಾಗಿ ಕಾರ್ಯದರ್ಶಿಗೆ ರಜೆಯನ್ನು ಮಂಜೂರು ಮಾಡಬಹುದು.

**XXX XXX XXX**

**ಶ್ರೀ ಘಾಟಿ ಸುಬ್ರಹ್ಮಣ್ಯ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024**
**(2024ರ ಕರ್ನಾಟಕ ಅಧಿನಿಯಮ ಸಂಖ್ಯೆ 15), ಉದ್ಧೃತ ಭಾಗ**

**XXX XXX XXX**

**10. ಕಾರ್ಯದರ್ಶಿಯ ನೇಮಕಾತಿ.**- (1) ರಾಜ್ಯ ಸರ್ಕಾರವು, ಕರ್ನಾಟಕ ಸರ್ಕಾರ ಸಚಿವಾಲಯ ಸೇವೆ/ ಕರ್ನಾಟಕ ಆಡಳಿತ ಸೇವೆಗಳ (ಸೂಪರ್ ಟೈಮ್ ಸ್ಕೇಲ್)/ ಧರ್ಮಾದಾಯ ಇಲಾಖೆಯ ಎ-ದರ್ಜೆಯ ಹಿರಿಯ ಶ್ರೇಣಿಯ ಅಧಿಕಾರಿಯನ್ನು ಪ್ರಾಧಿಕಾರದ ಕಾರ್ಯದರ್ಶಿಯಾಗಿ ಮತ್ತು ಧರ್ಮಾದಾಯ ಇಲಾಖೆಯ ಬಿ-ದರ್ಜೆಯ ಅಧಿಕಾರಿಯನ್ನು ಪ್ರಾಧಿಕಾರದ ಉಪಕಾರ್ಯದರ್ಶಿಯಾಗಿ ನೇಮಿಸತಕ್ಕದ್ದು.

(2) ಕಾರ್ಯದರ್ಶಿಯು, ಮತ್ತು ಇತರ ಅಧಿಕಾರಿಗಳು ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ವೇತನ ಮತ್ತು ಇತರ ಭತ್ಯೆಗಳನ್ನು ಪಡೆಯತಕ್ಕದ್ದು.

(3) ರಾಜ್ಯ ಸರ್ಕಾರವು, ಕಾಲಕಾಲಕ್ಕೆ ತಾನು ಯುಕ್ತವೆಂದು ಭಾವಿಸುವ ಅಂಥ ಅವಧಿಗಾಗಿ ಕಾರ್ಯದರ್ಶಿಗೆ ರಜೆಯನ್ನು ಮಂಜೂರು ಮಾಡಬಹುದು.

**ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024**
**(2024ರ ಕರ್ನಾಟಕ ಅಧಿನಿಯಮ ಸಂಖ್ಯೆ 16), ಉದ್ಧೃತ ಭಾಗ**

**XXX XXX XXX**

**10. ಕಾರ್ಯದರ್ಶಿಯ ನೇಮಕಾತಿ.**- (1) ರಾಜ್ಯ ಸರ್ಕಾರವು, ಕರ್ನಾಟಕ ಸರ್ಕಾರ ಸಚಿವಾಲಯ ಸೇವೆ/ ಕರ್ನಾಟಕ ಆಡಳಿತ ಸೇವೆಗಳ (ಸೂಪರ್ ಟೈಮ್ ಸ್ಕೇಲ್)/ ಧರ್ಮಾದಾಯ ಇಲಾಖೆಯ ಎ-ದರ್ಜೆಯ ಹಿರಿಯ ಶ್ರೇಣಿಯ ಅಧಿಕಾರಿಯನ್ನು ಪ್ರಾಧಿಕಾರದ ಕಾರ್ಯದರ್ಶಿಯಾಗಿ ಮತ್ತು ಧರ್ಮಾದಾಯ ಇಲಾಖೆಯ ಬಿ-ದರ್ಜೆಯ ಅಧಿಕಾರಿಯನ್ನು ಪ್ರಾಧಿಕಾರದ ಉಪಕಾರ್ಯದರ್ಶಿಯಾಗಿ ನೇಮಿಸತಕ್ಕದ್ದು.

(2) ಕಾರ್ಯದರ್ಶಿಯು, ಮತ್ತು ಇತರ ಅಧಿಕಾರಿಗಳು ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ವೇತನ ಮತ್ತು ಇತರ ಭತ್ಯೆಗಳನ್ನು ಪಡೆಯತಕ್ಕದ್ದು.

(3) ರಾಜ್ಯ ಸರ್ಕಾರವು, ಕಾಲಕಾಲಕ್ಕೆ ತಾನು ಯುಕ್ತವೆಂದು ಭಾವಿಸುವ ಅಂಥ ಅವಧಿಗಾಗಿ ಕಾರ್ಯದರ್ಶಿಗೆ ರಜೆಯನ್ನು ಮಂಜೂರು ಮಾಡಬಹುದು.

**XXX XXX XXX**

ಸರ್ಕಾರಿ ಮುದ್ರಣಾಲಯ, ಸುವರ್ಣ ಸೌಧ, ಬೆಳಗಾವಿ, ಕಾಸೂ 46, ಪ್ರತಿಗಳು 250, 12ನೇ ಡಿಸೆಂಬರ್ 2025